**All India Radio: Bangalore**
**Regional Bulletin In Kannada**
**22.03.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯಾದ್ಯಂತ ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ; ಸಹಜಸ್ಥಿತಿಯಲ್ಲಿ ಜನ ಜೀವನ
2. ನ್ಯಾಯಯುತ ಕ್ಷೇತ್ರ ಮರುವಿಂಗಡನೆಗೆ ಆಗ್ರಹಿಸಿ ಚೆನ್ನೈನಲ್ಲಿ ಜಂಟಿ ಕ್ರಿಯಾ ಸಮಿತಿ ಸಭೆ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾಗಿ
3. ಬಾಂಗ್ಲಾ ನಡೆಯುತ್ತಿರುವ ಹಿಂದೂಗಳ ಮೇಲಿನ ದೌರ್ಜನ್ಯ ತಡೆಗಟ್ಟಲು ವಿಶ್ವಸಂಸ್ಥೆ ಮಧ್ಯ ಪ್ರವೇಶಿಸಬೇಕು - ಆರ್‌ಎಸ್‌ಎಸ್
4. ಇಂದು ವಿಶ್ವ ಜಲ ದಿನ: ನೀರಿನ ಸುಸ್ಥಿರ ನಿರ್ವಹಣೆಗಾಗಿ ಜಾಗೃತಿ
5. ಚಿಕ್ಕಬಳ್ಳಾಪುರ ನಗರಸಭೆಯಲ್ಲಿ ; ವಿಪ್ ಉಲ್ಲಂಘಿಸಿದ ಆರೋಪ ೭ ಕಾಂಗ್ರೆಸ್ ಸದಸ್ಯರು ಅನರ್ಹ

<><><><>

ರಾಜ್ಯಾದ್ಯಂತ ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಾಹನಗಳ ಸಂಚಾರ ಎಂದಿನಂತೆ ಸಾಮಾನ್ಯವಾಗಿತ್ತು. ಪ್ರತಿಭಟನಾ ಮೆರವಣಿಗೆ ನಡೆಸಲು ಯೋಜಿಸಿದ್ದ ಕನ್ನಡಪರ ಹೋರಾಟಗಾರರಾದ ವಾಟಾಳ್ ನಾಗರಾಜ್, ಸಾ.ರಾ. ಗೋವಿಂದು ಸೇರಿದಂತೆ ಇತರೆ ಹೋರಾಟಗಾರರನ್ನು ಬೆಂಗಳೂರಿನ ಟೌನ್‌ಹಾಲ್ ಬಳಿ ಪೊಲೀಸರು ವಶಕ್ಕೆ ಪಡೆದರು. ಮೈಸೂರಿನಲ್ಲಿ ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ನಗರದ ಕೇಂದ್ರೀಯ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು. ಎಂಇಎಸ್ ಕಾರ್ಯಕರ್ತರ ಪುಂಡಾಟಿಕೆ ಹಾಗೂ ವಿವಿಧ ಬೇಡಿಕೆಗಳನ್ನು ಈಡೇರಿಕೆಗೆ ಆಗ್ರಹಿಸಿ ವಿವಿಧ ಕನ್ನಡ ಪರ ಸಂಘಟನೆಗಳು ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿತ್ತು. ಈ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆಯಿಂದ ವಿವಿಧ ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ನಗರದ ಕೇಂದ್ರೀಯ ಬಸ್ ನಿಲ್ದಾಣಕ್ಕೆ ಜಮಾಯಿಸಿ, ಸಾರಿಗೆ ಸಂಚಾರ ತಡೆದು ಪ್ರತಿಭಟನೆ ನಡೆಸಿದರು. ಈ ವೇಳೆ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದರು. ಕನ್ನಡಿಗರ ಮೇಲಿನ ಹಲ್ಲೆ ಖಂಡಿಸಿ, ಹಾಗೂ ನೀರಾವರಿ ಯೋಜನೆಗಳ ಜಾರಿಗಾಗಿ ಒತ್ತಾಯಿಸಿ, ವಿವಿಧ ಕನ್ನಡ ಪರ ಸಂಘಟನೆಗಳು ಕರೆ ನೀಡಿರುವ ಕರ್ನಾಟಕ ರಾಜ್ಯ ಬಂದ್‌ಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ವಿವಿಧ ಕನ್ನಡ ಪರ ಸಂಘಟನೆಗಳು ಪ್ರತಿಭಟನೆ ನಡೆಸಿ, ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿದರು. ರಾಜ್ಯ ರಸ್ತೆ ಸಾರಿಗೆ ಸಂಚಾರ ಎಂದಿನಂತಿತ್ತು. ಶಾಲಾ ಕಾಲೇಜುಗಳು ಎಂದಿನಂತೆ ಕಾರ್ಯ ನಿರ್ವಹಿಸಿದವು. ಮಾರುಕಟ್ಟೆ ವಹಿವಾಟು ಎಂದಿನಂತಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಚಿತ್ರದುರ್ಗ ಜಿಲ್ಲೆಯಲ್ಲಿ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಸ್ ಸಂಚಾರ ಸಾಮಾನ್ಯವಾಗಿತ್ತು. ಚಿತ್ರದುರ್ಗ ನಗರದಲ್ಲಿ ಆಟೋಗಳ ಸೇವೆ ಸಾಮಾನ್ಯವಾಗಿದೆ. ಸರಕಾರಿ ಬಸ್, ತರಕಾರಿ ಅಂಗಡಿ, ಔಷಧ ಅಂಗಡಿ, ಹೋಟೆಲ್ ಸಾಮಾನ್ಯ ಸೇವೆ ಒದಗಿಸುತ್ತಿವೆ. ಬಳ್ಳಾರಿ ಜಿಲ್ಲೆಯಲ್ಲಿ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಸಾರಿಗೆ ವ್ಯಾಪಾರ ವಹಿವಾಟು ಸೇರಿದಂತೆ ಎಲ್ಲವೂ ಎಂದಿನಂತೆಯೇ ಸಾಗಿದೆ. ಬಂದ್ ಹಿನ್ನೆಲೆಯಲ್ಲಿ ಕರವೇ ಶಿವರಾಮೆಗೌಡ ಬಣದ ಕೆಲ ಕಾರ್ಯಕರ್ತರು ಬೈಕ್‌ಗಳಲ್ಲಿ ನಗರದಲ್ಲಿ ಸಂಚರಿಸಿ, ಬಂದ್‌ಗೆ ಬೆಂಬಲಿಸುವಂತೆ ಮನವಿ ಮಾಡಿದರು. ಗಡಗಿ ಚೆನ್ನಪ್ಪ ಸರ್ಕಲ್ ಬಳಿ ಬಂದು ಎಂಇಎಸ್ ವಿರುದ್ಧ ಘೋಷಣೆ ಕೂಗಿದರು. ನಂತರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿ ಸಲ್ಲಿಸುವಂತೆ ಆಗ್ರಹಿಸಿ. ಮಲೆನಾಡು ನಗರಿ ಶಿವಮೊಗ್ಗದಲ್ಲಿ ಬಂದ್‌ಗೆ ನೀರಸ ಪ್ರತಿಕ್ರಿಯೆ ದೊರೆತಿದೆ. ಜನ ಜೀವನ ಎಂದಿನಂತೆ ಸಾಗಿದೆ. ಕೆಎಸ್‌ಆರ್‌ಟಿಸಿ ಹಾಗೂ ಖಾಸಗಿ ಬಸ್‌ಗಳ ಸಂಚಾರ ಎಂದಿನಂತೆ ಸಾಗಿವೆ. ಆಟೋ ಹಾಗೂ ಇತರೆ

ಸಾರಿಗೆ ವಾಹನಗಳ ಸಂಚರದಲ್ಲೂ ಯಾವುದೇ ವ್ಯತ್ಯಯ ಕಂಡುಬಂದಿಲ್ಲ. ರಾಜ್ಯ ಬಂದ್‌ಗೆ ರಾಮನಗರ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಮನಗರ ಜಿಲ್ಲೆಯಾದ್ಯಂತ ಕೆಲವು ಕನ್ನಡ ಸಂಘಟನೆಗಳು ಪ್ರತಿಭಟನೆ ನಡೆಸಿ, ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿದರು. ಕರ್ನಾಟಕ ಬಂದ್‌ಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಚಿಕ್ಕಮಗಳೂರು ನಗರದ ಹಲವೆಡೆ ಅಂಗಡಿಗಳು, ಹೊಟೆಲ್, ಪೆಟ್ರೋಲ್ ಬಂಕ್‌ಗಳನ್ನು ಮುಚ್ಚಲಾಗಿದ್ದು, ಕೆಲವೆಡೆ ತೆರೆಯಲಾಗಿದೆ. ಖಾಸಗಿ ಬಸ್ ಸಂಚಾರ ಸ್ಥಗಿತಗೊಂಡಿದ್ದು, ಸರ್ಕಾರಿ ಬಸ್‌ಗಳು ಎಂದಿನಂತೆ ಸಂಚರಿಸುತ್ತಿವೆ. ಆಟೋ, ಟ್ಯಾಕ್ಸಿ ಸಂಚಾರ ವಿರಳವಾಗಿದೆ. ಇನ್ನು ನಗರದ ಐ.ಜಿ. ರಸ್ತೆ, ಮಲ್ಲಂದೂರು ರಸ್ತೆಗಳಲ್ಲಿ ಕನ್ನಡ ಪರ ಸಂಘಟನೆಗಳ ಸದಸ್ಯರು ಪ್ರತಿಭಟನೆ ನಡೆಸಿದ್ದು, ಸರ್ಕಾರಿ ಬಸ್ ನಿಲ್ದಾಣದಲ್ಲಿ ಬಲವಂತವಾಗಿ ಅಂಗಡಿಗಳನ್ನು ಮುಚ್ಚಿಸಲು ಯತ್ನಿಸಿದವರನ್ನು ಪೊಲೀಸರು ತಡೆದ ಘಟನೆ ಕೂಡ ನಡೆದಿದೆ. ಮಂಡ್ಯದಲ್ಲಿ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮಂಡ್ಯ ನಗರ ವ್ಯಾಪ್ತಿಯಲ್ಲಿ ಎಲ್ಲಾ ಅಂಗಡಿ ಮುಗ್ಗಟ್ಟುಗಳು ಬಂದ್ ಆಗಿದ್ದವು. ಅಗತ್ಯ ಸೌಲಭ್ಯ ಹೊರತುಪಡಿಸಿ, ಉಳಿದೆಲ್ಲವು ಬಂದ್ ಆಗಿತ್ತು. ಕನ್ನಡಪರ, ರೈತಪರ ಸಂಘಟನೆಗಳು ಪ್ರತಿಭಟನಾ ರ‍್ಯಾಲಿ ನಡೆಸಿದವು. ಕರ್ನಾಟಕ ಬಂದ್‌ಗೆ ವಾಣಿಜ್ಯ ನಗರಿ ಹುಬ್ಬಳ್ಳಿಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಧಾರವಾಡ-ಹುಬ್ಬಳಿ ಜನರಿಗೆ ಯಾವುದೇ ಬಂದ್ ಬಿಸಿ ತಟ್ಟಿಲ್ಲ. ವಾಹನ ಸಂಚಾರ, ಜನರ ಓಡಾಟ ಹಾಗೂ ಆಟೋ ಕಾರ್ಯಾಚರಣೆ ಎಂದಿನಂತೆ ಮುಂದುವರೆದಿದೆ. ಕರ್ನಾಟಕ ಬಂದ್ ಗೆ ಬಹುತೇಕ ಸಂಘಟನೆಗಳು ಬೆಂಬಲ ಸೂಚಿಸಿಲ್ಲ. ಇನ್ನೂ ಅಂಗಡಿ, ಮುಂಗಟ್ಟುಗಳು ಎಂದಿನಂತೆ ತೆರೆದಿದ್ದು, ವ್ಯಾಪಾರ ವಹಿವಾಟು ಸಹಜ ಸ್ಥಿತಿಯಲ್ಲಿ ಮುಂದುವರೆದಿದೆ. ವಿವಿಧ ಕನ್ನಡಪರ ಸಂಘಟನೆಗಳು ಕರೆ ನೀಡಿದ ಕರ್ನಾಟಕ ಬಂದ್‌ಗೆ ಬೆಳಗಾವಿಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಂಘಟನೆಗಳ ಪ್ರತಿಭಟನೆಗೆ ಮಾತ್ರ ಸೀಮಿತವಾಗಿತ್ತು. ಬೆಳಗಾವಿಯಲ್ಲಿ ಸಾರಿಗೆ ಸೇವೆ ಎಂದಿನಂತೆ ಮುಂದುವರೆದಿದ್ದು, ಅಂಗಡಿ ಮುಗ್ಗಟ್ಟುಗಳು ತೆರೆದಿದ್ದವು. ಶಾಲಾ-ಕಾಲೇಜುಗಳು ಎಂದಿನಂತೆ ಕಾರ್ಯನಿರ್ವಹಿಸಿತು. ಕನ್ನಡಪರ ಸಂಘಟನೆಯ ಕಾರ್ಯಕರ್ತರು ನಗರದ ಸಂಗೋಳ್ಳಿ ರಾಯಣ್ಣ ವೃತ್ತದಿಂದ ಚನ್ನಮ್ಮ ವೃತ್ತದವರೆಗೆ ಪ್ರತಿಭಟನೆ ನಡೆಸಿದರು. ಒತ್ತಾಯವಾಗಿ ಸಾರಿಗೆ, ಅಂಗಡಿ ಮುಗ್ಗಟ್ಟುಗಳನ್ನು ಬಂದ್ ಮಾಡಿಸಲು ಮುಂದಾದಾಗ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದರು. ಕರ್ನಾಟಕ ಬಂದ್‌ಗೆ ವಾಣಿಜ್ಯ ನಗರಿ ದಾವಣಗೆರೆಯಲ್ಲಿ ಸಾರ್ವಜನಿಕರಿಂದ ಯಾವುದೇ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ. ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ ಕನ್ನಡ ಪರ ಸಂಘಟನೆಯ ೨೦ಕ್ಕೂ ಅಧಿಕ ಜನರನ್ನು ಪೊಲೀಸರು ವಶಕ್ಕೆ ಪಡೆದು ನಂತರ ಬಿಡುಗಡೆಗೊಳಿಸಿದರು. ಕನ್ನಡಪರ ಸಂಘಟನೆಗಳು ನೀಡಿರುವ ಕರ್ನಾಟಕ ಬಂದ್‌ಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಜಿಲ್ಲಾ ಕೇಂದ್ರ ಚಿಕ್ಕಬಳ್ಳಾಪುರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕು ಕೇಂದ್ರಗಳಲ್ಲಿ ಎಂದಿನಂತೆ ಅಂಗಡಿ ಮುಂಗಟ್ಟುಗಳ ತೆರೆದಿದ್ದು, ವ್ಯಾಪಾರ ವಹಿವಾಟು ಎಂದಿನಂತೆ ಸಹಜವಾಗಿತ್ತು. ಕರ್ನಾಟಕ ಬಂದ್ ಶಾಂತಿಯುತವಾಗಿ ನಡೆಯುತ್ತಿದ್ದು, ರಾಜ್ಯದಲ್ಲಿ ಯಾವುದೇ ಅಹಿತಕರ ಘಟನೆ ನಡೆದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು. ತುಮಕೂರು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಂದ್ ಆಚರಣೆಯಲ್ಲಿ ಕಾನೂನು ಸುವ್ಯವಸ್ಥೆಗೆ ಭಂಗವಾಗದಂತೆ ಕ್ರಮವಹಿಸಲು ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಸೂಚನೆ ನೀಡಲಾಗಿತ್ತು. ಅದರಂತೆ ಪೊಲೀಸ್ ಇಲಾಖೆ ಕಾರ್ಯನಿರ್ವಹಿಸುತ್ತಿದೆ ಎಂದರು. ಬಂದ್ ವೇಳೆ ಕಾನೂನು ಸುವ್ಯವಸ್ಥೆಗೆ ಭಂಗ ತರುವವರನ್ನು ಬಂಧಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದು, ರಾಜ್ಯದಲ್ಲಿ ಬಂದ್ ಶಾಂತಿಯುತವಾಗಿ ನಡೆಯುತ್ತಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ ಎಂದು ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು.

<><><><>

ನ್ಯಾಯಯುತ ಕ್ಷೇತ್ರ ಮರುವಿಂಗಡನೆಗೆ ಆಗ್ರಹಿಸಿ, ಜಂಟಿ ಕ್ರಿಯಾ ಸಮಿತಿ ಸಭೆ ತಮಿಳುನಾಡಿನ ಚೆನ್ನೈನಲ್ಲಿ ಇಂದು ನಡೆಯುತ್ತಿದೆ. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಪಾಲ್ಗೊಂಡಿದ್ದಾರೆ. ಇದಕ್ಕೂ ಮುನ್ನ ಚೆನ್ನೈ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಮ್ಮ ಹಕ್ಕು, ಅಸ್ತಿತ್ವಕ್ಕೆ ಹೋರಾಡಲು, ಸಂವಿಧಾನ ಉಳಿವಿಗಾಗಿ ನಾವು ಒಟ್ಟಾಗಿದ್ದೇವೆ ಎಂದು ಹೇಳಿದ್ದಾರೆ. ಸಂಸತ್ ಸ್ಥಾನಗಳು ಕಡಿಮೆಯಾಗಲು ನಾವು ಬಿಡುವುದಿಲ್ಲ. ದಕ್ಷಿಣದ ರಾಜ್ಯಗಳು ದೇಶದ ಬೆಳವಣಿಗೆಗೆ ಸಾಕಷ್ಟು ಕೊಡುಗೆ ನೀಡುತ್ತಿವೆ. ಶೈಕ್ಷಣಿಕ ಗುಣಮಟ್ಟದಲ್ಲಿ, ಆರ್ಥಿಕ ಬೆಳವಣಿಗೆ ಸೇರಿದಂತೆ ಅನೇಕ ವಿಷಯಗಳಲ್ಲಿ ಸಾಕಷ್ಟು ಮುಂದಿದ್ದೇವೆ. ತೆರಿಗೆ ಪಾವತಿಯಲ್ಲಿ ಮುಂಚೂಣಿಯಲ್ಲಿದ್ದೇವೆ ಎಂದರು.

<><><>

ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಹಿಂದೂಗಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟಲು ವಿಶ್ವಸಂಸ್ಥೆ ಮತ್ತು ಜಾಗತಿಕ ಸಮುದಾಯ ಮಧ್ಯಪ್ರವೇಶಿಸಬೇಕೆಂದು ಬೆಂಗಳೂರಿನಲ್ಲಿ ನಡೆಯುತ್ತಿರುವ ಆರ್‌ಎಸ್‌ಎಸ್‌ನ ಅಖಿಲ ಭಾರತೀಯ ಪ್ರತಿನಿಧಿ ಸಭೆ ಕೋರಿದೆ. ಹಿಂದೂಗಳ ಮೇಲಿನ ದಾಳಿ ಹಾಗೂ ಹಿಂಸಾಚಾರವನ್ನು ನಿಲ್ಲಿಸುವಂತೆ ಬಾಂಗ್ಲಾದೇಶ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಆಗ್ರಹಿಸಿದೆ. ಬಾಂಗ್ಲಾದೇಶದಲ್ಲಿ ಹಿಂದೂಗಳು ಮತ್ತು ಇತರೆ ಸಮುದಾಯಗಳ ಮೇಲೆ ನಡೆಸಲಾಗುತ್ತಿರುವ ಅಮಾನವೀಯ ದಾಳಿ ಬಗ್ಗೆಯೂ ಸಭೆ ಕಳವಳ ವ್ಯಕ್ತಪಡಿಸಿದೆ. ಬಾಂಗ್ಲಾದೇಶದಲ್ಲಿ ಮೂಲಭೂತವಾದಿಗಳಿಂದ ಹಿಂದೂಗಳು ಎದುರಿಸುತ್ತಿರುವ ದೌರ್ಜನ್ಯಗಳು ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಸಭೆಯಲ್ಲಿ ಅಭಿಪ್ರಾಯವ್ಯಕ್ತವಾಗಿದೆ.

<><><>

ಇಂದು ವಿಶ್ವ ಜಲ ದಿನ. ಮಾರ್ಚ್ ೨೨ರಂದು ಆಚರಿಸುವ ಜಲ ದಿನ ಶುದ್ಧ ನೀರಿನ ಮಹತ್ವವನ್ನು ಎತ್ತಿ ತೋರಿಸುತ್ತದೆ. ನೀರಿನ ಸಂಪನ್ಮೂಲಗಳ ಸುಸ್ಥಿರ ನಿರ್ವಹಣೆಗಾಗಿ ಈ ದಿನವನ್ನು ಆಚರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣದ ತಮ್ಮ ಪೋಸ್ಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಕಲ ಜೀವರಾಶಿಗಳಿಗೂ ಅಗತ್ಯವಿರುವ ನೀರನ್ನು ಸಂರಕ್ಷಿಸುವ, ಮಿತವಾಗಿ ಬಳಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಅರಣ್ಯನಾಶ, ಹವಾಮಾನ ಬದಲಾವಣೆ, ತಾಪಮಾನ ಏರಿಕೆ ಪರಿಣಾಮ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಈ ನಿಟ್ಟಿನಲ್ಲಿ ನೀರಿನ ಮಹತ್ವವನ್ನು ಅರಿತು ಮುಂದಿನ ಪೀಳಿಗೆಗೂ ಜಲಸಂಪನ್ಮೂಲವನ್ನು ಉಳಿಸುವ ಕಾರ್ಯ ನಾವು ಮಾಡಬೇಕಿದೆ ಎಂದು ಹೇಳಿದ್ದಾರೆ. ಹಿಮನದಿಗಳ ಸಂರಕ್ಷಣೆ ಈ ವರ್ಷದ ವಿಶ್ವ ಜಲದಿನದ ಘೋಷ ವಾಕ್ಯವಾಗಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆಗಳಲ್ಲಿ ಇಂದು ವಿಶ್ವ ಜಲ ದಿನಾಚರಣೆ ಆಚರಿಸಲಾಯಿತು. ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಗರಸಭೆ ವತಿಯಿಂದ, ಸಾರ್ವಜನಿಕರ ಸಹಕಾರದೊಂದಿಗೆ ನಡೆದ ವಿಶ್ವ ಜಲ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಇಲ್ಲಿನ ಗಗನಾರ್ಯ ಅಯ್ಯ ಪಂತರ ಕಲ್ಯಾಣಿಯ ಸ್ವಚ್ಛತಾ ಕಾರ್ಯ ನಡೆಯಿತು. ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಿದ್ದ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಮಾತನಾಡಿ, ಯಾವುದೇ ನದಿ ಮೂಲಗಳಿಲ್ಲದೇ ಇರುವ ಬಯಲು ಸೀಮೆಯ ಪ್ರದೇಶಗಳಲ್ಲಿ, ಕೆರೆ, ಕುಂಟೆ ಮೊದಲಾದ ನೀರಿನ ಮೂಲಗಳನ್ನು ಕಾಪಾಡಿಕೊಳ್ಳಬೇಕಿರುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಹೇಳಿದರು. ಇತ್ತೀಚಿನ ದಿನಗಳಲ್ಲಿ ನೀರಿನ ಸಂಗ್ರಹಣ ವ್ಯವಸ್ಥೆಗಳು ವಿವಿಧ ಕಾರಣಗಳಿಂದಾಗಿ ಕ್ಷೀಣಿಸುತ್ತಿರುವುದರಿಂದ ಜಿಲ್ಲೆಯಲ್ಲಿ ತಾಪಮಾನ ಹೆಚ್ಚುತ್ತಿರುವುದು ಕಂಡು ಬಂದಿದೆ. ಈ ದಿಸೆಯಲ್ಲಿ ಜಲ ಮೂಲಗಳನ್ನು ಸಂರಕ್ಷಿಸುವ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಶಾಸಕ ಧೀರಜ್ ಮುನಿರಾಜು, ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್, ನಗರಸಭೆ ಪೌರಾಯುಕ್ತ ಕಾರ್ತಿಕೇಶ್ವರ ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಿದ್ದರು.

<><><>

ಚಿಕ್ಕಬಳ್ಳಾಪುರ ನಗರಸಭೆಯ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯ ವೇಳೆ ಪಕ್ಷದ ವಿಪ್ ಉಲ್ಲಂಘಿಸಿದ ಆರೋಪದ ಹಿನ್ನೆಲೆಯಲ್ಲಿ ವಿಚಾರಣೆ ನಡೆಸಿದ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಆರು ಮಂದಿ ಕಾಂಗ್ರೆಸ್ ಸದಸ್ಯರನ್ನು ನಗರಸಭೆ ಸದಸ್ಯತ್ವ ಸ್ಥಾನದಿಂದ ಅನರ್ಹಗೊಳಿಸಿ ಆದೇಶ ನೀಡಿದ್ದಾರೆ. ಚಿಕ್ಕಬಳ್ಳಾಪುರ ನಗರಸಭೆಯ ವ್ಯಾಪ್ತಿಯಲ್ಲಿ ಒಟ್ಟು ೩೧ ವಾರ್ಡ್‌ಗಳಿದ್ದು, ಈ ಪೈಕಿ ಅತಿ ಹೆಚ್ಚು ಸದಸ್ಯ ಸ್ಥಾನಗಳು ಅಂದರೆ ೧೬ ಸ್ಥಾನಗಳನ್ನು ಹೊಂದಿದ್ದ ಕಾಂಗ್ರೆಸ್, ಅಧಿಕಾರದ ಚುಕ್ಕಾಣಿ ಹಿಡಿಯಲು ಸಂಪೂರ್ಣ ಬಹುಮತವನ್ನು ಹೊಂದಿತ್ತು. ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯ ಎರಡನೇ ಅವಧಿಯ ಸಂದರ್ಭದಲ್ಲಿ ಆರು ಮಂದಿ ಕಾಂಗ್ರೆಸ್ ಸದಸ್ಯರು ಪಕ್ಷದ ವಿಪ್ ಉಲ್ಲಂಘಿಸಿ ಬಿಜೆಪಿ ಪಕ್ಷಕ್ಕೆ ಮತಚಲಾಯಿದ್ದಾರೆ ಎಂದು ಆರೋಪಿಸಿ, ಈ ಆರೂ ಸದಸ್ಯರನ್ನು ಸದಸ್ಯತ್ವದಿಂದ ಅನರ್ಹಗೊಳಿಸುವಂತೆ ಕೋರಿ ೨೦೨೪ ರ ಸೆಪ್ಟೆಂಬರ್ ೧೨ ರಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ.ಎನ್.ಕೇಶವರೆಡ್ಡಿ, ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರು. ಈ ಬಗ್ಗೆ ವಿಚಾರಣೆ ನಡೆಸಿ ಆರೂ ಸದಸ್ಯರನ್ನು ನಗರಸಭೆಯ ಸದಸ್ಯತ್ವದಿಂದ ಅನರ್ಹಗೊಳಿಸಿ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಆದೇಶಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>